# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಏಕಲವ್ಯ ಮಾದರಿ/ ಅಟಲ್ ಬಿಹಾರಿ ವಾಜಪೇಯಿ/ ಡಾ.ಬಿ.ಆರ್.ಅಂಬೇಡ್ಕರ್ / ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ರಚನೆ ಕುರಿತು .

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 262 ಸಮನ್ವಯ 2015, ದಿನಾಂಕ:15-12-2015.
2. ಸರ್ಕಾರದ ಸುತ್ತೋಲೆ ಸಂಖ್ಯೆ:60 ಮೋದೇಶಾ 2017, ದಿನಾಂಕ:13-04-2018.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರ ಪತ್ರ ಪತ್ರ ಸಂಖ್ಯೆ: ಕವಶಿಸಸ/ಶಿಕ್ಷಣ(3).ಸಿಆರ್-02/2018-19, ದಿನಾಂಕ: 02-09-2020

*****

**<u>ಪ್ರಸ್ತಾವನೆ:</u>**

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಏಕಲವ್ಯ ಮಾದರಿ/ ಅಟಲ್ ಬಿಹಾರಿ ವಾಜಪೇಯಿ/ ಡಾ.ಬಿ.ಆರ್.ಅಂಬೇಡ್ಕರ್ / ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ರಚಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ಸರ್ಕಾರದ ಸುತ್ತೋಲೆಯಲ್ಲಿ ಸ್ಥಳೀಯ ಸಂಸ್ಥೆ/ ಗ್ರಾಮ ಪಂಚಾಯಿತಿ ಸದಸ್ಯ, ಶಾಲೆಯ ವಿದ್ಯಾರ್ಥಿಯ ಪಾಲಕರು/ಪೋಷಕರು ಮತ್ತು ಶಿಕ್ಷಕರುಗಳನ್ನೊಳಗೊಂಡ ಆಡಳಿತ ಮಂಡಳಿಯನ್ನು ರಚಿಸುವುದು ಎಂದು ಸೂಚಿಸಲಾಗಿದೆ. ಅದರನ್ವಯ ಪುನರ್ ರಚನೆ ಸಮಿತಿಯಲ್ಲಿ ಸೇರಿಸಿಕೊಳ್ಳಲಾಗಿದೆ.

ಮೇಲೆ ಕ್ರಮಾಂಕ (3) ರಲ್ಲಿ ಓದಲಾದ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರು ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಏಕಲವ್ಯ ಮಾದರಿ/ ಅಟಲ್ ಬಿಹಾರಿ ವಾಜಪೇಯಿ/ ಡಾ.ಬಿ.ಆರ್.ಅಂಬೇಡ್ಕರ್ / ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ರಚನೆ ಕುರಿತು ಪರಿಷ್ಕೃತ ಆದೇಶ ಹೊರಡಿಸಲು ಕೋರಿರುತ್ತಾರೆ.

| ಕ್ರ.ಸಂ | ವಿವರ | ಹುದ್ದೆ |
|---|---|---|
| 1 | ಸ್ಥಳೀಯ ವಿಧಾನಸಭಾ ಸದಸ್ಯರು | ಅಧ್ಯಕ್ಷರು |
| 2 | ಆಯಾ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 3 | ತಾಲ್ಲೂಕು ತಹಶಿಲ್ದಾರರು | ಸದಸ್ಯರು |
| 4 | ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು | ಸದಸ್ಯರು |

| | | |
|---|---|---|
| 5 | ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ | ಸದಸ್ಯರು |
| 6 | ಇಬ್ಬರು ವಿದ್ಯಾರ್ಥಿಗಳ ಪೋಷಕರು | ಸದಸ್ಯರು |
| 7 | ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 8 | ತಾಲ್ಲೂಕು ವಿಸ್ತರಣಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |
| 9 | ತಾಲ್ಲೂಕು ವೈದ್ಯಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಸದಸ್ಯರು |
| 10 | ಇಬ್ಬರು ವಸತಿ ಶಾಲೆ, ಪ್ರಾಂಶುಪಾಲರು, | ಸದಸ್ಯ ಕಾರ್ಯದರ್ಶಿಗಳು |

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 117 ಮೊದೇಶಾ 2019,**

**ಬೆಂಗಳೂರು, ದಿನಾಂಕ:04-01-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಏಕಲವ್ಯ ಮಾದರಿ/ ಅಟಲ್ ಬಿಹಾರಿ ವಾಜಪೇಯಿ/ ಡಾ.ಬಿ.ಆರ್.ಅಂಬೇಡ್ಕರ್ / ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು ಈ ಕೆಳಕಂಡಂತೆ ಪುನರ್ ರಚಿಸಿ ಆದೇಶಿಸಿದೆ.

| ಕ್ರ.ಸಂ | ವಿವರ | ಹುದ್ದೆ |
|---|---|---|
| 1 | ಸ್ಥಳೀಯ ವಿಧಾನಸಭಾ ಸದಸ್ಯರು | ಅಧ್ಯಕ್ಷರು |
| 2 | ಆಯಾ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 3 | ತಾಲ್ಲೂಕು ತಹಶಿಲ್ದಾರರು | ಸದಸ್ಯರು |
| 4 | ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು | ಸದಸ್ಯರು |
| 5 | ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ | ಸದಸ್ಯರು |
| 6 | ಇಬ್ಬರು ವಿದ್ಯಾರ್ಥಿಗಳ ಪೋಷಕರು | ಸದಸ್ಯರು |
| 7 | ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 8 | ತಾಲ್ಲೂಕು ವಿಸ್ತರಣಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |
| 9 | ತಾಲ್ಲೂಕು ವೈದ್ಯಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಸದಸ್ಯರು |
| 10 | ಇಬ್ಬರು ವಸತಿ ಶಾಲೆ, ಪ್ರಾಂಶುಪಾಲರು, | ಸದಸ್ಯ ಕಾರ್ಯದರ್ಶಿಗಳು |

**ಮೇಲ್ಕಂಡ ಸಮಿತಿಯ ಕರ್ತವ್ಯಗಳು:-**

1. ವಸತಿ ಶಾಲೆಯ ವಾರ್ಷಿಕ ಶೈಕ್ಷಣಿಕ ಕ್ರಿಯಾ ಯೋಜನೆ ತಯಾರಿಕೆಯಲ್ಲಿ ಸದಸ್ಯ ಕಾರ್ಯದರ್ಶಿಗಳಿಗೆ ಮಾರ್ಗದರ್ಶನ ನೀಡುವುದು.

2. ಬೋಧಕ/ ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳ ಕ್ರಮಬದ್ಧ ಹಾಗೂ ಸಕಾಲಿಕ ಹಾಜರಾತಿಯನ್ನು ನಿಯತವಾಗಿ ಮೇಲ್ವಿಚಾರಣೆ ಮಾಡುವುದು ಮತ್ತು ಪರಿಶೀಲಿಸುವುದು.
3. ಗೈರು ಹಾಜರಾಗುವ ವಿದ್ಯಾರ್ಥಿಗಳ ಪ್ರಮಾಣವನ್ನು ನಿಯತಕಾಲಿಕವಾಗಿ ಮೇಲ್ವಿಚಾರಣೆ ಮಾಡಿ ಅವರುಗಳ ಹಾಜರಾತಿ ಬಗ್ಗೆ ಖಚಿತ ಪಡಿಸಿಕೊಳ್ಳುವುದು.
4. ಪ್ರೋತ್ಸಾಹದಾಯಕ ಯೋಜನೆಗಳು, ಶೈಕ್ಷಣಿಕ ಸೌಲಭ್ಯಗಳ ಸಮರ್ಪಕ ವಿತರಣೆ ಬಗ್ಗೆ ಖಚಿತಪಡಿಸಿಕೊಂಡು ಅವುಗಳ ವಿತರಣೆಯ ಮೇಲ್ವಿಚಾರಣೆ ಮಾಡುವುದು.
5. ವಸತಿ ಶಾಲೆಯಲ್ಲಿ ಸಂಪೂರ್ಣ ನೈರ್ಮಲ್ಯ, ಸುಸ್ಥಿತಿ ಮತ್ತು ಶೈಕ್ಷಣಿಕ ಕಾರ್ಯಕ್ರಮಗಳು ನಿರ್ವಹಣೆಯಾಗುವಂತೆ ನೋಡಿಕೊಳ್ಳುವುದು.
6. ವಸತಿ ನಿಲಯದಲ್ಲಿ ವಿದ್ಯಾರ್ಥಿಗಳಿಗೆ ನೀಡುವ ಆಹಾರ ವಸತಿ ಸೌಕರ್ಯಗಳ ಬಗ್ಗೆ ಉಸ್ತುವಾರಿ ವಹಿಸುವುದು.
7. ಆಟದ ಮೈದಾನ ಶಾಲಾ ಆವರಣ ಗೋಡೆಗಳು, ಕೊಠಡಿಗಳು, ಶೌಚಾಲಯಗಳು ಪೀಠೋಪಕರಣ, ಪಾಠೋಪಕರಣ, ಕುಡಿಯುವ ನೀರಿನ ಸೌಲಭ್ಯ ಅಡುಗೆ ಮನೆ ಮುಂತಾದ ಮೂಲ ಸೌಕರ್ಯಗಳು ಹಾಗೂ ವಸತಿ ಶಾಲೆಗೆ ಅಗತ್ಯವಿರುವ ಸೌಕರ್ಯಗಳನ್ನು ಹೆಚ್ಚಿಸಲು ನೆರವು ನೀಡುವುದು.
8. ಶಿಕ್ಷಕರ/ ನಿಲಯ ಪಾಲಕರ/ ವಿದ್ಯಾರ್ಥಿಗಳ ಸಾಧನೆಯನ್ನು ನಿಯತಕಾಲಿಕವಾಗಿ ಅವಲೋಕಿಸಿ ಮೇಲ್ವಿಚಾರಣೆ ನಡೆಸುವುದು.
9. ವಸತಿ ಶಾಲಾ ಕಾರ್ಯ ಚಟುವಟಿಕೆಗಳಲ್ಲಿ ಎಲ್ಲಾ ಪೋಷಕರುಗಳು ಭಾಗಿಗಳಾಗುವಂತೆ ಮಾಡಲು ನಿಯತಕಾಲಿಕವಾಗಿ "ಪೋಷಕರ ದಿನ" ಆಚರಿಸುವುದು.
10. ಒತ್ತುವರಿ ಮತ್ತು ಯಾವುದೇ ಆಡಚಣೆಯಾಗದಂತೆ ಶಾಲಾ ಆವರಣವನ್ನು ಪರಿಸರವನ್ನು ರಕ್ಷಿಸುವುದು.
11. ವಿದ್ಯಾರ್ಥಿಗಳ ದೈಹಿಕ ಮಾನಸಿಕ, ಆಧ್ಯಾತ್ಮಿಕ ಶಕ್ತಿಗಳನ್ನು ಹೊರ ಹೊಮ್ಮಿಸಿ ಗುಣಾತ್ಮಕ ಶಿಕ್ಷಣ ಹೊಂದುವಲ್ಲಿ ಕೈಗೊಳ್ಳಬಹುದಾದ ವಿವಿಧ ತರಬೇತಿಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಕ್ರೀಡಾಕೂಟಗಳು, ವ್ಯಕ್ತಿತ್ವ ವಿಕಸನ ಶಿಬಿರಗಳು ಇತ್ಯಾದಿಗಳನ್ನು ಹಮ್ಮಿಕೊಂಡು ಯಶಸ್ವಿಯಾಗಿ ನಿರ್ವಹಿಸುವಲ್ಲಿ ಸಲಹೆ ಸಹಕಾರ ನೀಡಿ ಪ್ರೋತ್ಸಾಹಿಸುವುದು.
12. ವಸತಿ ಶಾಲೆಯ ಸರ್ವಾಂಗೀಣ ಅಭಿವೃದ್ಧಿಯಲ್ಲಿ ವಸತಿ ಶಾಲೆಯ ಉತ್ತಮ ಗುಣಾತ್ಮಕ ಶಿಕ್ಷಣ ಕೇಂದ್ರವನ್ನಾಗಿ ರೂಪಿಸುವಲ್ಲಿ ಶ್ರಮಿಸುವುದು.
13. ವಸತಿ ಶಾಲೆಯ ಅಭಿವೃದ್ಧಿಗೆ ಬೇಕಾದ ಎಲ್ಲಾ ಸೂಕ್ತ ಕ್ರಮಗಳನ್ನು ಕೈಗೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

4/1/2021

(ಪಿ.ಎನ್.ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು, (ಲೆಕ್ಕಪತ್ರ/ ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು,
7. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
8. ಸಮಿತಿ ಸದಸ್ಯರು (ಕ್ರ.ಸಂ 7,8&9 ಇವರಿಗೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರ ಮುಖಾಂತರ)
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-2 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

****